ಕರ್ನಾಟಕ ಸರ್ಕಾರ

ಉದ್ಯೋಗ ಮತ್ತು ತರಬೇತಿ ಇಲಾಖೆ

**ವಿಶ್ವವಿದ್ಯಾನಿಲಯ ಉದ್ಯೋಗ ಮಾಹಿತಿ ಮತ್ತು ಮಾರ್ಗದರ್ಶನ ಕೇಂದ್ರ, ಮಂಗಳಗಂಗೋತ್ರಿ**

# 'ಕರ್ನಾಟಕ ಲೋಕ ಸೇವಾ ಆಯೋಗದ ನೇಮಕಾತಿಗಳ ಪ್ರಕಟಣೆ'

ಆಯೋಗವು ಕರ್ನಾಟಕ ನಾಗರೀಕ ಸೇವೆಗಳು(ನೇರ ನೇಮಕಾತಿ)(ಸಾಮಾನ್ಯ) ನಿಯಮಗಳು 2021ರ ನಿಯಮಗಳು ಮತ್ತು ತಿದ್ದುಪಡಿ ನಿಯಮ 2022ರನ್ವಯ ಈ ಕೆಳಕಂಡ ಉಳಿಕೆ ಮೂಲ ವೃಂದದ ಗ್ರೂಪ್ ಸಿ' ಹುದ್ದೆಗಳನ್ನು ಭರ್ತಿ ಮಾಡಲು ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. ಆಸಕ್ತ ಅರ್ಹ ಅಭ್ಯರ್ಥಿಗಳು ವೆಬ್ಸೈಟ್ ವಿಳಾಸಗಳಾದ https://kpsc.kar.nic.in/ ಗಳಲ್ಲಿ ಅಧಿಸೂಚನೆ ಮತ್ತು ಅರ್ಜಿ ನಮೂನೆಗಳನ್ನು ಡೌನ್ಲೋಡ್ ಮಾಡಿಕೊಂಡು ಸಲ್ಲಿಸಬಹುದಾಗಿದೆ. ಅರ್ಜಿಗಳನ್ನು ಆನ್ಲೈನ್‌ಲ್ಲಿ **ದಿ: 30.03.2023 ರಿಂದ ದಿ: 30.04.2023**ರವರೆಗೆ ಸಲ್ಲಿಸಬಹುದಾಗಿದೆ.

**ಇಲಾಖೆಯ ಹೆಸರು/ ಹುದ್ದೆಯ ಪದನಾಮ**: ಸಹಕಾರ ಇಲಾಖೆಯ ಸಹಕಾರ ಸಂಘಗಳ ನಿಬಂಧಕರ ಕಛೇರಿಯಲ್ಲಿನ ಉಳಿಕೆ ಮೂಲ ವೃಂದದ ಸಹಕಾರ ಸಂಘಗಳ ನಿರೀಕ್ಷಕರು 47 ಹುದ್ದೆಗಳು.

**ಹುದ್ದೆಗಳ ಸಂಖ್ಯೆ**: 47

**ವಿದ್ಯಾರ್ಹತೆ**: A pass in Bachelor's degree in Agricultural Science, Marketing and Co-Operation, Commerce and Business Management.

ವಿಶೇಷ ಸೂಚನೆ: ಇಲಾಖೆಯ ಸ್ಪಷ್ಟೀಕರಣದಂತೆ ಬಿಬಿಎ ವಿದ್ಯಾರ್ಹತೆಯನ್ನು ಪರಿಗಣಿಸಲಾಗುವುದು.

**ವಯೋಮಿತಿ:** ಕನಿಷ್ಠ- **18** ವರ್ಷಗಳು

ಗರಿಷ್ಠ- ಸಾಮಾನ್ಯ ಅರ್ಹತೆ -**35** ವರ್ಷಗಳು

ಪ್ರ.ವ.-2ಎ, ಪ್ರ.ವ.2ಬಿ ಪ್ರ.ವ 3ಎ, ಪ್ರ.ವ.3ಬಿ – **38** ವರ್ಷಗಳು

ಪ.ಜಾ., ಪ.ಪಂ., ಪ್ರ.ವ -1 - **40** ವರ್ಷಗಳು

**ವೇತನ ಶ್ರೇಣಿ**: **ರೂ. 27,650-52,650/-**

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: **080-30574957/ 30574901** ಅಥವಾ ಉಪಮುಖ್ಯಸ್ಥರು, ವಿಶ್ವವಿದ್ಯಾನಿಲಯ ಉದ್ಯೋಗ ಮಾಹಿತಿ ಮತ್ತು ಮಾರ್ಗದರ್ಶನ ಕೇಂದ್ರ, ಮಂಗಳಗಂಗೋತ್ರಿ ಕಛೇರಿಯನ್ನು ಸಂಪರ್ಕಿಸಬಹುದಾಗಿದೆ.

21/3/23

(ಐಸ್.ಜೆ.ಹೇಮಚಂದ್ರ)

ಉಪಮುಖ್ಯಸ್ಥರು

ಉಪ ಮುಖ್ಯಸ್ಥರು
ವಿಶ್ವವಿದ್ಯಾನಿಲಯ ಉದ್ಯೋಗ ಮಾಹಿತಿ ಮತ್ತು
ಮಾರ್ಗದರ್ಶನ ಕೇಂದ್ರ
ಮಂಗಳೂರು ವಿಶ್ವವಿದ್ಯಾನಿಲಯ
ಮಂಗಳಗಂಗೋತ್ರಿ-574 199

ಕರ್ನಾಟಕ ಲೋಕಸೇವಾ ಆಯೋಗ, " ಉದ್ಯೋಗ ಸೌಧ ",ಬೆಂಗಳೂರು -560001

ಸಂಖ್ಯೆ: ಪಿಎಸ್ ಸಿ 492 ಆರ್ ಟಿಬಿ(4) /2022-23/2335 ದಿನಾಂಕ:17-03-2023

## ಅಧಿಸೂಚನೆ

1. ಆಯೋಗವು ಕರ್ನಾಟಕ ನಾಗರೀಕ ಸೇವೆಗಳು (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2021ರ ನಿಯಮಗಳು ಹಾಗೂ ತಿದ್ದುಪಡಿ ನಿಯಮ 2022ರನ್ವಯ ಈ ಕೆಳಕಂಡ ಉಳಿಕೆ ಮೂಲ ವೃಂದದ ಗ್ರೂಪ್ 'ಸಿ' ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ On-line ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ.

| ಕ್ರಮ ಸಂಖ್ಯೆ | ಇಲಾಖೆಯ ಹೆಸರು /ಹುದ್ದೆಯ ಪದನಾಮ | ಉಳಿಕೆ ಮೂಲ ವೃಂದದ |
|---|---|---|
| 1 | ಸಹಕಾರ ಸಂಘಗಳ ನಿರೀಕ್ಷಕರು | 47 |

2. **ಅರ್ಜಿ ಶುಲ್ಕ / ಸ್ವೀಕೃತಿ ಕಾಲಮಿತಿ :**

| | |
|---|---|
| ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಪ್ರಾರಂಭಿಕ ದಿನಾಂಕ | 30-03-2023 |
| ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 30-04-2023 |
| ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ | 02-05-2023 |

**ವಿಶೇಷ ಸೂಚನೆ:-**

- ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮೊದಲು ಎಲ್ಲಾ ವಿವರಗಳನ್ನು ಓದಿ ಅರ್ಥೈಸಿಕೊಂಡು ಆನಂತರವೇ ತಮಗೆ ಅನ್ವಯವಾಗುವ ವಿವರಗಳನ್ನು ಭರ್ತಿ ಮಾಡತಕ್ಕದ್ದು.
- ಒಮ್ಮೆ ಅರ್ಜಿ ಸಲ್ಲಿಸಿದ ನಂತರ ಅರ್ಜಿಯಲ್ಲಿ ವಿವರಗಳನ್ನು ತಿದ್ದುಪಡಿ / ಸೇರ್ಪಡೆ ಮಾಡುವಂತೆ ನೀಡುವ ಯಾವುದೇ ಮನವಿಗಳನ್ನು ತಿರಸ್ಕರಿಸಲಾಗುವುದು.
- ನಿಯಮಾನುಸಾರ ಆನ್ ಲೈನ್ ಅರ್ಜಿಯೊಂದಿಗೆ ಸಲ್ಲಿಸುವ ಲಗತ್ತುಗಳ ಆಧಾರದ ಮೇಲೆ ಮಾತ್ರವೇ ದಾಖಲೆಗಳ ಪರಿಶೀಲನೆ ಮಾಡಲಾಗುವುದರಿಂದ ವಯೋಮಿತಿ, ವಿದ್ಯಾರ್ಹತೆಗೆ ಸಂಬಂಧಿಸಿದ ಪ್ರಮಾಣ ಪತ್ರಗಳನ್ನು ಹಾಗೂ ಅರ್ಜಿಯಲ್ಲಿ ಕೋರಿರುವ ಎಲ್ಲಾ ಮೀಸಲಾತಿ ಪ್ರಮಾಣ ಪತ್ರ/ಇತರೆ ಪ್ರಮಾಣ ಪತ್ರಗಳನ್ನು ತಮ್ಮ ಹೆಸರಿನಲ್ಲಿಯೇ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಅಧಿಸೂಚನೆಯ ಅನುಬಂಧದಲ್ಲಿ ಸೂಚಿಸಿರುವ ನಮೂನೆಗಳಲ್ಲಿಯೇ ಕಡ್ಡಾಯವಾಗಿ ಪಡೆದಿಟ್ಟುಕೊಂಡು ಸದರಿ ದಾಖಲೆಗಳನ್ನು ಅರ್ಜಿ ಸಲ್ಲಿಸುವಾಗ ಅಪ್‌ಲೋಡ್ ಮಾಡತಕ್ಕದ್ದು. (ದಾಖಲೆಗಳು ಸ್ಪಷ್ಟವಾಗಿರಬೇಕು) ತಪ್ಪಿದ್ದಲ್ಲಿ ಅವರ ಮೀಸಲಾತಿ/ಅಭ್ಯರ್ಥಿತ್ವವನ್ನು ತಿರಸ್ಕರಿಸಲಾಗುವುದು.
- ಅರ್ಜಿಯಲ್ಲಿ ಕೋರದೇ ತದನಂತರದಲ್ಲಿ ಮನವಿ ಮುಖಾಂತರ ಯಾವುದೇ ಮೀಸಲಾತಿಯನ್ನು ಕೋರಿದ್ದಲ್ಲಿ/ದಾಖಲೆಗಳನ್ನು ಸಲ್ಲಿಸಿದಲ್ಲಿ ಪರಿಗಣಿಸಲಾಗುವುದಿಲ್ಲ.

2.1 ಅರ್ಜಿಗಳನ್ನು Online ಮೂಲಕವೇ ಭರ್ತಿ ಮಾಡಿ , ಭಾವಚಿತ್ರ/ಸಹಿ /ವಯೋಮಿತಿ/ ವಿದ್ಯಾರ್ಹತೆ ಹಾಗೂ ಕೋರಿದ ಮೀಸಲಾತಿಗೆ ಸಂಬಂಧಿಸಿದ ಎಲ್ಲಾ ದಾಖಲೆಗಳನ್ನು ಅಪ್ಲೋಡ್ ಮಾಡಿದ ನಂತರ ಶುಲ್ಕವನ್ನು ಯಾವುದೇ ಕಾಮನ್ ಸರ್ವೀಸ್ ಸೆಂಟರ್‌ಗಳಲ್ಲಿ (CSC) ಅಥವಾ ನೆಟ್ ಬ್ಯಾಂಕಿಂಗ್ / ಡೆಬಿಟ್ ಕಾರ್ಡ್/ ಕ್ರೆಡಿಟ್ ಕಾರ್ಡ್ ಮೂಲಕ ಸಂದಾಯ ಮಾಡಬಹುದಾಗಿರುತ್ತದೆ. ಶುಲ್ಕವನ್ನು ಪಾವತಿಸದ ಹಾಗೂ ದಾಖಲೆಗಳನ್ನು/ ಭಾವಚಿತ್ರ/ ಸಹಿಯನ್ನು ಅಪ್ಲೋಡ್ ಮಾಡದೇ ಇರುವ /ಅಸ್ಪಷ್ಟ ದಾಖಲೆಗಳನ್ನು ಅಪ್ಲೋಡ್ ಮಾಡಿರುವ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಶುಲ್ಕವನ್ನು ಕಾಮನ್ ಸರ್ವೀಸ್ ಸೆಂಟರ್ ಗಳಲ್ಲಿ (CSC) ಪಾವತಿಸಲು ಅವಕಾಶ ನೀಡಲಾಗಿರುವುದರಿಂದ ಅರ್ಜಿಗಳನ್ನು ಇಲ್ಲಿಯೂ ಸಹ ಸಲ್ಲಿಸಬಹುದಾಗಿದೆ.